# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರು, ರವರ ಕಛೇರಿ, ಬಿಬಿಎಂಪಿ ಕೇಂದ್ರ ಕಛೇರಿ, ಎನ್. ಆರ್. ಚೌಕ, ಬೆಂಗಳೂರು-02.

ಸಂಖ್ಯೆ: ಮು.ಆ/ಪಿ ಎನ್ ಆರ್/112/2024-25 ದಿನಾಂಕ: 01-08-2024

## -: ಆದೇಶ :-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪಾರಂಪರಿಕ(ಪಂಚೆ) ಉಡುಪು ಧರಿಸಿ ವಾಣಿಜ್ಯ ಸಮುಚ್ಚಯಕ್ಕೆ ಪ್ರವೇಶಿಸುವ ಸಮಯದಲ್ಲಿ ಅಲ್ಲಿನ ಭದ್ರತಾ ಸಿಬ್ಬಂದಿಗಳು ತಡೆ ಹಿಡಿದು ಪ್ರವೇಶವನ್ನು ನಿರಾಕರಿಸಿರುವ ಕುರಿತಾದ ವರದಿಗಳು ಮುದ್ರಣ/ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಕಟಣೆಗೊಂಡಿದ್ದು, ಇದು ಸಾರ್ವಜನಿಕರ ಪಾರಂಪರಿಕ ಉಡುಪಿನ ಬಗ್ಗೆ ತಾರತಮ್ಯ ಮಾಡಿರುವುದು ಕಂಡು ಬಂದಿರುತ್ತದೆ. ಭಾರತೀಯ ಸಂವಿಧಾನ ಆರ್ಟಿಕಲ್ 14, 19, 21, 25ನ್ನು ಗಣನೆಗೆ ತೆಗೆದುಕೊಂಡು ಮತ್ತು ಸಂವಿಧಾನದ ಆರ್ಟಿಕಲ್ 15(1), (2) ರಲ್ಲಿ ಭಾರತದ ಪ್ರತಿಯೊಬ್ಬ ನಾಗರೀಕರಿಗೂ ಸಾರ್ವಜನಿಕ ಪ್ರದೇಶಗಳಿಗೆ ಸಮಾನ ಪ್ರವೇಶ ಮತ್ತು ಸಾಮಾಜಿಕ ಸಮಾನತೆಯ ಹಕ್ಕನ್ನು ಖಾತ್ರಿ ಪಡಿಸುತ್ತದೆ. ಅದು ಭಾಷೆ, ಜಾತಿ, ಜನಾಂಗ, ಧರ್ಮ, ಉಡುಪು ಮತ್ತು ಜನ್ಮಸ್ಥಳದ ಆಧಾರದ ಮೇಲೆ ಮಾತ್ರ ತಾರತಮ್ಯ ಮಾಡಬಾರದೆಂದು ಉಲ್ಲೇಖಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾಣಿಜ್ಯ ಸಮುಚ್ಚಯಗಳು ಹಾಗೂ ಇತರೆ ಅಂಗಡಿಗಳ ಮಾಲೀಕರಿಗೆ ಈ ಕೆಳಕಂಡಂತೆ ನಿರ್ದೇಶನ ನೀಡಲಾಗಿದೆ.

- ಎಲ್ಲಾ ವಾಣಿಜ್ಯ ಸಮುಚ್ಚಯಗಳು ಹಾಗೂ ಇತರೆ ಅಂಗಡಿಗಳ ಮಾಲೀಕರುಗಳು ಸಾರ್ವಜನಿಕರಿಗೆ ಪ್ರವೇಶ ಸಂದರ್ಭದಲ್ಲಿ ಭಾಷೆ, ಜಾತಿ, ಜನಾಂಗ, ಧರ್ಮ, ಉಡುಪು ಮತ್ತು ಜನ್ಮಸ್ಥಳದ ಆಧಾರದ ಮೇಲೆ ಮಾತ್ರ ತಾರತಮ್ಯ ಮಾಡಬಾರದೆಂದು ಈ ಮೂಲಕ ಸೂಚಿಸಿದೆ.
- ಎಲ್ಲಾ ವಾಣಿಜ್ಯ ಸಮುಚ್ಚಯಗಳು ಹಾಗೂ ಇತರೆ ಅಂಗಡಿಗಳ ಮಾಲೀಕರುಗಳು ಸಾರ್ವಜನಿಕರು ಧರಿಸಿರುವ ಉಡುಪಿನ ಆಧಾರದ ಮೇಲೆ ಮಾತ್ರ ಪ್ರವೇಶವನ್ನು ನಿರಾಕರಿಸದಂತೆ ತಮ್ಮ ಭದ್ರತಾ ಸಿಬ್ಬಂದಿಗಳಿಗೆ ಮೇಲೆ ಸೂಚಿಸಿರುವ ನಿರ್ದೇಶನದಂತೆ ಸೂಕ್ತ ಮಾರ್ಗದರ್ಶನ ನೀಡಲು ಸೂಚಿಸಿದೆ.
- ಮುಂದಿನ ದಿನಗಳಲ್ಲಿ ಈ ರೀತಿಯ ಯಾವುದೇ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮ ವಹಿಸಲು ಎಲ್ಲಾ ವಾಣಿಜ್ಯ ಸಮುಚ್ಚಯಗಳು ಹಾಗೂ ಇತರೆ ಅಂಗಡಿಗಳ ಮಾಲೀಕರುಗಳಿಗೆ ಈ ಮೂಲಕ ಕಟ್ಟುನಿಟ್ಟಾಗಿ ಸೂಚಿಸಿದೆ.
- ಮುಂದಿನ ದಿನಗಳಲ್ಲಿ ಮೇಲ್ಕಂಡ ಅಂಶಗಳನ್ನು ಪಾಲಿಸದಿದ್ದಲ್ಲಿ ಅಂತಹ ವಾಣಿಜ್ಯ ಸಮುಚ್ಚಯಗಳು ಮತ್ತು ಅಂಗಡಿಗಳು ಸಂವಿಧಾನದ ಹಕ್ಕುಗಳನ್ನು ಮತ್ತು ಮಾನವ ಹಕ್ಕುಗಳನ್ನು ಉಲ್ಲಂಘಿಸಿದ

ಪು.ತಿ.ನೋ ..

ಅಪರಾಧ ಎಂದು ಪರಿಗಣಿಸಿ ಉದ್ದಿಮೆ ಪರವಾನಗಿಯನ್ನು ರದ್ದುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಹಾಗೂ ಸದರಿ ವಾಣಿಜ್ಯ ಸಮುಚ್ಚಯಗಳು /ಉದ್ದಿಮೆಗಳಲ್ಲಿರುವ ಎಲ್ಲಾ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿಸಲಾಗುವುದು.

- ಮುಂದಿನ ದಿನಗಳಲ್ಲಿ ವಾಣಿಜ್ಯ ಸಮುಚ್ಚಯಗಳು ಮತ್ತು ಅಂಗಡಿಗಳಲ್ಲಿ ಈ ರೀತಿಯಾದ ಘಟನೆಗಳು ಸಂಭವಿಸಿದ್ದಲ್ಲಿ, ಅಂತಹ ವಾಣಿಜ್ಯ ಸಮುಚ್ಚಯಗಳು ಮತ್ತು ಅಂಗಡಿಗಳ ಮೇಲೆ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಮುಖ್ಯ ಆಯುಕ್ತರು,
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಗಳು:**

1. ಮಾನ್ಯ ಮುಖ್ಯ ಆಡಳಿತಾಧಿಕಾರಿಗಳು, ಬಿಬಿಎಂಪಿ ರವರಿಗೆ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು(ಆರೋಗ್ಯ), ಬಿಬಿಎಂಪಿ ರವರಿಗೆ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮುಖ್ಯ ಆರೋಗ್ಯಾಧಿಕಾರಿಗಳು(ಸಾ.ಆ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಎಲ್ಲಾ ವಲಯಗಳ ಆರೋಗ್ಯ ವೈದ್ಯಾಧಿಕಾರಿಗಳು, ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಎಲ್ಲಾ ವಲಯಗಳ ಆರೋಗ್ಯಾಧಿಕಾರಿಗಳು, ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಕಛೇರಿ ಕಡತಕ್ಕೆ.